ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಮಂಡ್ಯ ಮೈಷುಗರ್ ಸಕ್ಕರೆ ಕಾರ್ಖಾನೆ ಕುರಿತು

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):-

555(691) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಮೈಷುಗರ್ ಸಕ್ಕರೆ ಕಾರ್ಖಾನೆಯು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದರಿಂದಾಗಿ ಕಬ್ಬು ಬೆಳೆಗಾರರಿಗೆ ಹಾಗೂ ನೌಕರರಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕಾರ್ಖಾನೆ ಮುಚ್ಚಿರುವುದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಈ) ಕಾರ್ಖಾನೆಯನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ಯಾವ ಕಾಲಮಿತಿಯಲ್ಲಿ ಕಾರ್ಖಾನೆಯನ್ನು ಪ್ರಾರಂಭಿಸಲಾಗುವುದು ?